ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

"ವಾರ್ತಾ ಭವನ", ಡಿ.ಸಿ.ಕಂಪೌಂಡ, ಧಾರವಾಡ–580001. ( 0836–2447469)

ಇ–ಮೇಲ್:– varthabhavandwd74@gmail.com

ದಿನಾಂಕ: 30–12–2018

ವಾವಿಸಂ:763

# ಅಖಿಲ ಭಾರತ 84 ನೇಯ ಕನ್ನಡ ಸಾಹಿತ್ಯ ಸಮ್ಮೇಳನ
# ವೇದಿಕೆ ನಿರ್ಮಾಣ ಬಹುತೇಕ ಪೂರ್ಣ – ಪ್ರಸಾದ ಅಬ್ಬಯ್ಯ

**ಧಾರವಾಡ (ಕರ್ನಾಟಕ ವಾರ್ತೆ) ಡಿ.30:** ಬರುವ ಜನವರಿ 4,5 ಹಾಗೂ 6 ರಂದು ನಡೆಯಲಿರುವ ಅಖಿಲ ಭಾರತ 84 ನೇ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ಸಮಿತಿ ಅಧ್ಯಕ್ಷರಾಗಿರುವ ,ಶಾಸಕ ಪ್ರಸಾದ ಅಬ್ಬಯ್ಯ ಅವರು ಇಂದು ಮುಖ್ಯ ವೇದಿಕೆ,ಮಾಧ್ಯಮ ಕೇಂದ್ರ, ಭೋಜನಾಂಗಣ, ಪುಸ್ತಕ ಮಳಿಗೆಗಳ ನಿರ್ಮಾಣ ಕಾರ್ಯ ಪರಿಶೀಲಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಸಾದ ಅಬ್ಬಯ್ಯ ಅವರು, 300*600 ಅಡಿಯ ಮುಖ್ಯ ವೇದಿಕೆಯನ್ನು 50 ಸಾವಿರ ಜನರಿಗೆ ಆಸನ ವ್ಯವಸ್ಥೆಯೊಂದಿಗೆ ನಿರ್ಮಿಸಲಾಗುತ್ತಿದೆ. ಶೇಕಡಾ 80 ರಷ್ಟು ಕಾರ್ಯ ಪೂರ್ಣವಾಗಿದೆ.ಕಲಾವಿದರಾದ ಬಿ.ಮಾರುತಿ,ಪ್ರತಾಪ ಬಹುರೂಪಿ ಹಾಗೂ ತಂಡದವರು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು, ಕಿತ್ತೂರ ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ, ಕೃಷಿ ವಿಶ್ವವಿದ್ಯಾಲಯ ಗೋಪುರ, ಹಂಪಿಯ ಶಿಲ್ಪಕಲಾಕೃತಿಗಳ ಪ್ರತಿಬಿಂಬಗಳನ್ನು ಒಳಗೊಂಡ ವೇದಿಕೆಯ ಸಭಾಮಂಟಪ ನಿರ್ಮಾಣವಾಗುತ್ತಿದೆ. ಕೃಷಿ ವಿಶ್ವವಿದ್ಯಾಲಯ ಫುಟ್ಬಾಲ್ ಮೈದಾನದ ಪೆವಿಲಿಯನ್ ಕಟ್ಟಡದಲ್ಲಿ ಮಾಧ್ಯಮಕೇಂದ್ರ ನಿರ್ಮಿಸಲಾಗುತ್ತಿದೆ. 500 ಪುಸ್ತಕ ಮಳಿಗೆಗಳು, 250 ವಾಣಿಜ್ಯ ಮಳಿಗೆಗಳು, ನೋಂದಣಿಗಾಗಿ 75 ಮಳಿಗೆಗಳು ತಲೆ ಎತ್ತಿವೆ. 150 ಜನ ಅಧಿಕಾರಿಗಳು ಹಾಗೂ 300 ಜನ ಎನ್.ಎಸ್.ಎಸ್. ಸ್ವಯಂ ಸೇವಕರನ್ನು ನಿಯೋಜಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮುಖ್ಯಮಂಟಪದ ವಿನ್ಯಾಸವನ್ನು ಬಿಡುಗಡೆಗೊಳಿಸಿದರು. ಜಿಲ್ಲಾ ಕಸಾಪ ಅಧ್ಯಕ್ಷ ಡಾ.ಲಿಂಗರಾಜ ಅಂಗಡಿ, ಲೋಕೋಪಯೋಗಿ ಅಧೀಕ್ಷಕ ಇಂಜಿನಿಯರ್ ಶಿವಯೋಗಿ ಹಿರೇಮಠ, ಕಾರ್ಯನಿರ್ವಾಹಕ ಇಂಜಿನಿಯರ್ ವಿರೂಪಾಕ್ಷಪ್ಪ ಯಮಕನಮರಡಿ, ಎಇಇ ವಿ.ಎನ್.ಪಾಟೀಲ, ಎಇ ಯು.ಎಂ.ಗದಗಕರ್, ಲೆಕ್ಕ ಪರಿಶೋಧನಾಧಿಕಾರಿ ರಮೇಶ ಎಸ್ ಕುಲಕರ್ಣಿ, ಆಹಾರ ಇಲಾಖೆ ಉಪನಿರ್ದೇಶಕ ಸದಾಶಿವ ಮರ್ಜಿ, ರಂಗಾಯಣ ಆಡಳಿತಾಧಿಕಾರಿ ಕೆ.ಹೆಚ್.ಚನ್ನೂರ, ಮಹೇಂದ್ರ ಸಿಂಘೆ, ಪರ್ವೇಜ್ ಕೊಣ್ಣೂರ ಹಾಗೂ ಮತ್ತಿತರರು ಇದ್ದರು.

**********